# ಪೌಲನು ತಿಮೊಥೇಯನಿಗೆ ಬರೆದ
# ಎರಡನೆಯ ಪತ್ರ

## ಮುನ್ನುಡಿ

ಪೌಲನು ತಿಮೊಥೇಯನಿಗೆ ಬರೆದ ಈ ಎರಡನೆಯ ಪತ್ರ ಬಹುಮಟ್ಟಿಗೆ, ಪ್ರೇಷಿತನಾದವನು ತನ್ನ ಕಿರಿಯ ಸಂಗಾತಿಯೂ ಸಹಾಯಕನೂ ಆದ ತಿಮೊಥೇಯನಿಗೆ ಕೊಟ್ಟ ಹಿತವಚನಗಳಿಂದ ತುಂಬಿದೆ.

ಸಂಕಟದಲ್ಲಿ ಸಹಿಷ್ಣುತೆ ಇರಬೇಕೆಂಬುದೇ ಈ ಪತ್ರದ ಮುಖ್ಯ ವಿಷಯ. ಎಷ್ಟೇ ಕಷ್ಟಕಾರ್ಪಣ್ಯಗಳು, ಅಡ್ಡಿ ಆತಂಕಗಳು ಬಂದೊದಗಿದರೂ ತಿಮೊಥೇಯನು ಕ್ರಿಸ್ತಯೇಸುವಿಗೆ ಜೀವಂತ ಹಾಗೂ ಪ್ರಾಮಾಣಿಕ ಸಾಕ್ಷಿಯಾಗಿರಬೇಕು; ಒಳ್ಳೆಯ ಬೋಧಕ ಹಾಗೂ ಶುಭಸಂದೇಶದ ಪ್ರಚಾರಕ ಆಗಿರಬೇಕು; ತನ್ನ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸಬೇಕು; ಹಳೆಯ ಮತ್ತು ಹೊಸ ಒಡಂಬಡಿಕೆಯ ಉದಾತ್ತ ಬೋಧನೆಯನ್ನು ಆದರ್ಶವಾಗಿಟ್ಟುಕೊಳ್ಳಬೇಕು.

ಅವಿವೇಕವಾದ, ಹುರುಳಿಲ್ಲದ ವಾಗ್ವಾದಗಳಲ್ಲಿ ಕಾಲಹರಣ ಮಾಡುವುದು ಕೆಲವರ ಹವ್ಯಾಸವಾಗಿತ್ತು. ಇಂಥ ವಾಗ್ವಾದಗಳು ಭಕ್ತರಿಗೆ ನಿಷ್ಪ್ರಯೋಜಕ ಮಾತ್ರವಲ್ಲ, ವಿಶ್ವಾಸದ ವಿನಾಶಕ್ಕೆ ಕಾರಣವಾಗುತ್ತವೆ, ಎಂದು ಲೇಖಕನು ತಿಮೊಥೇಯನನ್ನು ಬಹುವಾಗಿ ಎಚ್ಚರಿಸುತ್ತಾನೆ.

ಪೌಲನು ತನ್ನ ಜೀವನದ ಆದರ್ಶವನ್ನು ತಿಮೊಥೇಯನ ಕಣ್ಮುಂದೆ ಇರಿಸುತ್ತಾನೆ. ದೃಢವಿಶ್ವಾಸ, ಶಾಂತಿಸಹನೆ, ಪ್ರೀತಿವಾತ್ಸಲ್ಯ, ಕಷ್ಟಸಹಿಷ್ಣುತೆ, ಹಿಂಸೆಬಾಧೆಗಳಲ್ಲಿ ಸ್ಥೈರ್ಯ – ಇವೇ ಮುಂತಾದ ಸದ್ಗುಣಗಳನ್ನು ಅವನ ನೆನಪಿಗೆ ತಂದು ಅವನನ್ನು ಹುರಿದುಂಬಿಸುತ್ತಾನೆ.

### ಪರಿವಿಡಿ


| | | |
|---|---|---|
| ಪೀಠಿಕೆ | – | 1.1. – 1.2 |
| ಪ್ರಶಂಸೆ–ಪ್ರೋತ್ಸಾಹ | – | 1.3 – 2.13 |
| ಸಲಹೆ–ಎಚ್ಚರಿಕೆ | – | 2.14 – 4.5 |


### ಪೀಠಿಕೆ

**1** 1–2ನನ್ನ ಪ್ರೀತಿಯ ಪುತ್ರ ತಿಮೊಥೇಯನಿಗೆ ಪೌಲನು ಬರೆಯುವ ಪತ್ರ. ಕ್ರಿಸ್ತಯೇಸುವಿನಲ್ಲಿರುವವರಿಗೆ
ಲಭಿಸುವ ಅಮರ ಜೀವದ ವಾಗ್ದಾನವನ್ನು ಸಾರಲು ದೈವಚಿತ್ತಾನುಸಾರ ಪ್ರೇಷಿತನಾದ ನಾನು
ತಿಳಿಸುವುದೇನೆಂದರೆ: ಪಿತನಾಗಿರುವ ದೇವರೂ ಒಡೆಯರಾದ ಕ್ರಿಸ್ತಯೇಸುವೂ ನಿನಗೆ ಕೃಪೆಯನ್ನೂ
ಕರುಣೆಯನ್ನೂ ಶಾಂತಿಯನ್ನೂ ಅನುಗ್ರಹಿಸಲಿ!

### ಪ್ರಶಂಸೆ–ಪ್ರೋತ್ಸಾಹ

3–4ನಾನು ಹಗಲಿರುಳೂ ನನ್ನ ಪ್ರಾರ್ಥನೆಯಲ್ಲಿ ತಪ್ಪದೆ ನಿನ್ನನ್ನು ಸ್ಮರಿಸಿಕೊಳ್ಳುತ್ತೇನೆ. ನನ್ನ
ಪೂರ್ವಿಕರ ಹಾಗೆ ಶುದ್ಧಮನಸ್ಸಾಕ್ಷಿಯಿಂದ ನನ್ನ ಆರಾಧ್ಯ ದೇವರಿಗೆ ನಿನ್ನ ವಿಷಯವಾಗಿ ಧನ್ಯವಾದಗಳನ್ನು
ಸಲ್ಲಿಸುತ್ತೇನೆ. ಅಂದು ನೀನು ಸುರಿಸಿದ ಕಣ್ಣೀರನ್ನು ನಾನು ಇನ್ನೂ ಮರೆತಿಲ್ಲ. ನಿನ್ನನ್ನು ಪುನಃ ನೋಡಿ
ಆನಂದ ಪಡಬೇಕೆಂದು ಹಂಬಲಿಸುತ್ತಿದ್ದೇನೆ. 5ನಿನ್ನ ದೃಢವಿಶ್ವಾಸವು ನನ್ನ ನೆನಪಿನಲ್ಲಿದೆ. ನಿನ್ನ ಅಜ್ಜಿ

ಲೋವಿಯಳಲ್ಲೂ ತಾಯಿ ಯೂನಿಸಳಲ್ಲೂ ನೆಲೆಗೊಂಡಿದ್ದ ವಿಶ್ವಾಸ ಈಗ ನಿನ್ನಲ್ಲೂ ಪೂರ್ಣವಾಗಿ
ನೆಲೆಗೊಂಡಿದೆಯೆಂದು ನಾನು ನಂಬಿದ್ದೇನೆ. 6ನಾನು ನಿನ್ನ ಮೇಲೆ ಹಸ್ತ ನಿಕ್ಷೇಪಮಾಡಿ ಪ್ರಾರ್ಥಿಸಿದಾಗ
ನೀನು ಪಡೆದಂಥ ವರದಾನವನ್ನು ಪುನಃ ಪ್ರಜ್ವಲಿಸುವಂತೆ ಮಾಡಬೇಕೆಂದು ನಿನಗೆ ಜ್ಞಾಪಿಸುತ್ತೇನೆ. 7ದೇವರು
ನಮಗೆ ಪ್ರದಾನಮಾಡಿರುವ ಪವಿತ್ರಾತ್ಮ ನಮ್ಮನ್ನು ಹೇಡಿಗಳನ್ನಾಗಿ ಮಾಡುವುದಿಲ್ಲ; ನಮ್ಮಲ್ಲಿ ದೈವೀಶಕ್ತಿ, ಪ್ರೀತಿ
ಹಾಗೂ ಸಂಯಮಗಳು ಪ್ರವರ್ಧಿಸುವಂತೆ ಮಾಡುತ್ತಾರೆ.

8 ಆದ್ದರಿಂದ ಕ್ರಿಸ್ತಯೇಸುವಿಗೆ ಸಾಕ್ಷಿ ಆಗಿರಲು ನಾಚಬೇಡ. ಅವರಿಗಾಗಿ ಬಂಧಿಯಾಗಿರುವ ನನ್ನ
ವಿಷಯದಲ್ಲೂ ನಾಚಬೇಡ. ದೇವರ ಶಕ್ತಿಯನ್ನು ಆಶ್ರಯಿಸಿ ನನ್ನೊಡನೆ ಶುಭಸಂದೇಶಕ್ಕೋಸ್ಕರ ನಿನ್ನ
ಪಾಲಿನ ಶ್ರಮವನ್ನು ಅನುಭವಿಸು. 9ನಾವು ಸ್ವಂತ ಸತ್ಕಾರ್ಯಗಳಿಂದಲ್ಲ, ದೇವರ ಯೋಜನೆ ಹಾಗೂ
ಅನುಗ್ರಹಗಳಿಂದಲೇ ಜೀವೋದ್ಧಾರ ವರವನ್ನು ಪಡೆದಿದ್ದೇವೆ; ದೇವರ ಪ್ರಜೆಗಳೆನಿಸಿಕೊಂಡಿದ್ದೇವೆ. ಈ
ಅನುಗ್ರಹವನ್ನು ಕ್ರಿಸ್ತಯೇಸುವಿನಲ್ಲಿ ಅನಾದಿಯಿಂದಲೇ ನಮಗೆ ಕೊಡಲಾಯಿತು. 10ಈ ಕಾಲದಲ್ಲೂ ನಮ್ಮ
ಉದ್ಧಾರಕ ಕ್ರಿಸ್ತಯೇಸುವಿನ ಪ್ರತ್ಯಕ್ಷದ ಮೂಲಕ ಅದನ್ನು ಬಹಿರಂಗಪಡಿಸಲಾಗಿದೆ. ಮೃತ್ಯುಶಕ್ತಿಯನ್ನು
ವಿನಾಶಗೊಳಿಸಿ ಅಮರ ಜೀವವನ್ನು ಶುಭಸಂದೇಶದ ಮೂಲಕ ಬೆಳಕಿಗೆ ತಂದವರು ಯೇಸುವೇ.

11 ಈ ಶುಭಸಂದೇಶವನ್ನು ಸಾರುವುದಕ್ಕೇ ಎಂದು ದೇವರು ನನ್ನನ್ನು ಪ್ರೇಷಿತನನ್ನಾಗಿಯೂ
ಬೋಧಕನನ್ನಾಗಿಯೂ ಶಿಕ್ಷಕನನ್ನಾಗಿಯೂ ನೇಮಿಸಿದ್ದಾರೆ. 12ಇದಕ್ಕಾಗಿಯೇ ಇಷ್ಟೆಲ್ಲಾ ಕಷ್ಟಕಾರ್ಪಣ್ಯಗಳನ್ನು
ನಾಚಿಕೆಪಡದೆ ಅನುಭವಿಸುತ್ತಿದ್ದೇನೆ. ನಾನು ಯಾರಲ್ಲಿ ವಿಶ್ವಾಸವನ್ನಿಟ್ಟಿದ್ದೇನೆ ಎಂದು ಚೆನ್ನಾಗಿ ಬಲ್ಲೆ. ನನ್ನ
ವಶಕ್ಕೆ ಒಪ್ಪಿಸಿರುವುದನ್ನು ಆ ದಿನದವರೆಗೂ ಕಾಪಾಡುವುದಕ್ಕೆ ಅವರು ಶಕ್ತರು. ಆದ್ದರಿಂದ ನಾನು ಪೂರ್ಣ
ಭರವಸೆಯಿಂದ ಇದ್ದೇನೆ. 13ಕ್ರಿಸ್ತಯೇಸುವಿನಲ್ಲಿ ನಮ್ಮದಾಗಿರುವ ವಿಶ್ವಾಸ ಹಾಗೂ ಪ್ರೀತಿಯಲ್ಲಿ ನೀನು
ನೆಲೆಗೊಂಡಿರು. ನಾನು ಬೋಧಿಸಿದ್ದನ್ನು ಆದರ್ಶವಾಗಿಟ್ಟುಕೊಂಡು ಅನುಸರಿಸು. 14ನಿನ್ನ ವಶಕ್ಕೆ
ಕೊಡಲಾಗಿರುವ ಸದ್ಬೋಧನೆಯನ್ನು ನಮ್ಮಲ್ಲಿ ವಾಸಿಸುವ ಪವಿತ್ರಾತ್ಮರ ಸಹಾಯದಿಂದ ಸುರಕ್ಷಿತವಾಗಿಡು.

15 ಏಷ್ಯಾ ಪ್ರಾಂತ್ಯದವರೆಲ್ಲ ನನ್ನನ್ನು ಕೈಬಿಟ್ಟುಹೋದರೆಂದು ನೀನು ಬಲ್ಲೆ. ಅವರೊಡನೆ ಫುಗೇಲನೂ
ಹೆರ್ಮೊಗೇನನೂ ಸಹ ಹೊರಟುಹೋದರು. 16ಒನೇಸಿಫೊರನ ಕುಟುಂಬವನ್ನು ಪ್ರಭು ಆಶೀರ್ವದಿಸಲಿ.
ಆತನು ಅನೇಕ ಸಾರಿ ನನ್ನನ್ನು ಆದರಿಸಿದನು. 17ನಾನು ಸೆರೆಯಾಳಾಗಿದ್ದರೂ ನಾಚಿಕೆಪಡದೆ ತಾನು ರೋಮ್
ನಗರಕ್ಕೆ ಬಂದ ಕೂಡಲೇ ನನ್ನನ್ನು ಎಲ್ಲೆಡೆಗಳಲ್ಲೂ ಹುಡುಕಿ ಕಂಡುಹಿಡಿದನು. 18ಅಂತಿಮ ದಿನದಂದು ಪ್ರಭು
ಯೇಸು ಆತನಿಗೆ ಕರುಣೆತೋರಲಿ. ನಾನು ಏಷ್ಯಾದಲ್ಲಿದ್ದಾಗ ಆತನು ನನಗೆ ಎಷ್ಟೊಂದು ನೆರವು
ನೀಡಿದನೆಂದು ನಿನಗೆ ಚೆನ್ನಾಗಿ ತಿಳಿದಿದೆ.

## ನಿಷ್ಠಾವಂತ ಸೈನಿಕ

**2** ಪ್ರಿಯ ಪುತ್ರನೇ, ಕ್ರಿಸ್ತ ಯೇಸುವಿನಲ್ಲಿರುವವರಿಗೆ ಲಭಿಸುವ ಅನುಗ್ರಹದಲ್ಲಿ ನೀನು ದೃಢನಾಗಿರು.
2ಹಲವರ ಮುಂದೆ ನಾನು ಮಾಡಿದ ಉಪದೇಶವನ್ನು ನೀನೇ ಕೇಳಿದ್ದೀ. ಅದೇ ಉಪದೇಶವನ್ನು ಇತರರಿಗೂ
ಬೋಧಿಸಲು ಪ್ರಾಮಾಣಿಕ ವ್ಯಕ್ತಿಗಳನ್ನು ನೇಮಿಸು. 3ಕ್ರಿಸ್ತಯೇಸುವಿನ ನಿಷ್ಠಾವಂತ ಸೈನಿಕನಂತೆ ಕಷ್ಟ
ದುಃಖಗಳನ್ನು ತಾಳ್ಮೆಯಿಂದ ಸಹಿಸಿಕೋ.

4 ಯುದ್ಧಕ್ಕೆ ಹೋಗುವ ಯಾವ ಸೈನಿಕನೂ ಲೋಕವ್ಯವಹಾರಗಳಲ್ಲಿ ಸಿಕ್ಕಿಕೊಳ್ಳನು. ಏಕೆಂದರೆ,
ತನ್ನನ್ನು ಸೈನ್ಯಕ್ಕೆ ಸೇರಿಸಿಕೊಂಡವನನ್ನು ಮೆಚ್ಚಿಸಲು ಅವನು ಪ್ರಯತ್ನಿಸುತ್ತಾನೆ. 5ಸ್ಪರ್ಧೆಯಲ್ಲಿ ಭಾಗವಹಿಸುವ
ಕ್ರೀಡಾಪಟು ಅದರ ನಿಯಮಗಳನ್ನು ಪಾಲಿಸದಿದ್ದರೆ ಬಹುಮಾನಗಳಿಸಲು ಸಾಧ್ಯವಿಲ್ಲ. 6ವ್ಯವಸಾಯದ
ಹುಟ್ಟುವಳಿಯಲ್ಲಿ ಮೊತ್ತಮೊದಲನೆಯ ಪಾಲು ಕಷ್ಟಪಟ್ಟ ರೈತನಿಗಲ್ಲವೇ? 7ನಾನು ಹೇಳುತ್ತಿರುವುದನ್ನು
ಆಲೋಚಿಸಿ ನೋಡು; ಇದೆಲ್ಲವನ್ನು ಚೆನ್ನಾಗಿ ಗ್ರಹಿಸಲು ಪ್ರಭು ನಿನಗೆ ನೆರವಾಗುವರು.

8-9ಕ್ರಿಸ್ತಯೇಸುವನ್ನು ಸ್ಮರಿಸಿಕೋ. ದಾವೀದನ ವಂಶಸ್ಥರಾದ ಅವರು ಮೃತರಾಗಿ
ಪುನರುತ್ಥಾನರಾದರು. ಇದೇ ನಾನು ಸಾರುವ ಶುಭಸಂದೇಶ. ಇದನ್ನು ಸಾರಿದ್ದರಿಂದಲೇ ನಾನು ಕಷ್ಟಗಳಿಗೆ
ಈಡಾಗಿದ್ದೇನೆ; ಪಾತಕಿಯಂತೆ ಬೇಡಿಗಳಿಂದ ಬಂಧಿತನಾಗಿದ್ದೇನೆ. ಆದರೆ ದೇವರ ವಾಕ್ಯವನ್ನು ಯಾರೂ

ಬಂಧಿಸುವಂತಿಲ್ಲ. [10]ದೇವರಿಂದ ಆಯ್ಕೆಯಾದ ಪ್ರಜೆಗಳು ಪ್ರಭು ಯೇಸುವಿನಲ್ಲಿ ಲಭಿಸುವ ಜೀವೋದ್ಧಾರವನ್ನೂ ಅನಂತ ಮಹಿಮೆಯನ್ನೂ ನನ್ನೊಂದಿಗೆ ಪಡೆಯಲೆಂದು ನಾನು ಇದೆಲ್ಲವನ್ನೂ ಅವರಿಗಾಗಿ ಸಹಿಸುತ್ತಿದ್ದೇನೆ. [11]ಈ ಮಾತು ನಂಬತಕ್ಕದ್ದಾಗಿದೆ:

[12] ನಾವು ಆತನೊಡನೆ ಸತ್ತಿದ್ದರೆ,
ಆತನೊಡನೆ ಜೀವಿಸುತ್ತೇವೆ;
ಸೈರಣೆಯುಳ್ಳವರು ನಾವಾದರೆ,
ಆತನೊಡನೆ ರಾಜ್ಯವಾಳುತ್ತೇವೆ;
ನಾವಾತನನು ನಿರಾಕರಿಸಿದರೆ,
ನಮ್ಮನ್ನಾತನು ನಿರಾಕರಿಸುತ್ತಾನೆ.
[13] ನಾವು ವಿಶ್ವಾಸಭ್ರಷ್ಟರಾದರೂ
ವಿಶ್ವಾಸಪಾತ್ರನಾತ;
ಕಾರಣ, ತನ್ನ ಸ್ವಭಾವಕ್ಕೆ ವಿರುದ್ಧ ವರ್ತಿಸನಾತ.

**ಪ್ರಾಮಾಣಿಕ ಸೇವಕ**

14 ಈ ವಿಷಯಗಳನ್ನು ನಿನ್ನ ಸಭೆಯವರಿಗೆ ಜ್ಞಾಪಕಪಡಿಸು. ವ್ಯರ್ಥವಾದ ವಾಗ್ವಾದಗಳನ್ನು ನಿಲ್ಲಿಸಬೇಕೆಂದು ಅವರನ್ನು ದೇವರ ಮುಂದೆ ಖಂಡಿತವಾಗಿ ಎಚ್ಚರಿಸು. ಇಂಥ ವಾಗ್ವಾದಗಳಿಂದ ಕೇಳುವವರಿಗೆ ಕೇಡಾಗುವುದೇ ಹೊರತು ಒಳಿತೇನೂ ಆಗದು. [15]ನೀನಾದರೋ ದೇವರಿಗೆ ಮೆಚ್ಚುಗೆಯಾದವನಂತೆ, ತನ್ನ ಕೆಲಸಕ್ಕೆ ಹಿಂದೆಗೆಯದ ಕೆಲಸಗಾರನಂತೆ, ಸುವಾರ್ತೆಯನ್ನು ಸರಿಯಾಗಿ ಸಾರುವವನಂತೆ ಬಾಳಲು ಪ್ರಯತ್ನಪಡು. [16]ಪ್ರಾಪಂಚಿಕ ಹರಟೆಗಳಿಂದ ದೂರವಿರು. ಅವುಗಳಲ್ಲಿ ಕಾಲಹರಣ ಮಾಡುವವರು ದೇವರಿಂದ ದೂರಸರಿಯುತ್ತಾರೆ. [17]ಅವರ ಮಾತು ರಾಜಹುಣ್ಣಿನಂತೆ ಹರಡಿಕೊಳ್ಳುತ್ತದೆ. ಹುಮೆನಾಯ ಮತ್ತು ಫಿಲೇತ ಇಂಥವರ ಗುಂಪಿಗೆ ಸೇರಿದ್ದಾರೆ. [18]ಅವರು ಸತ್ಯಮಾರ್ಗವನ್ನು ತ್ಯಜಿಸಿದ್ದಾರಲ್ಲದೆ ನಮ್ಮ ಪುನರುತ್ಥಾನವು ಈಗಾಗಲೇ ಮುಗಿದು ಹೋಗಿದೆಯೆಂದು ಹೇಳುತ್ತಾ ಕೆಲವರ ವಿಶ್ವಾಸವನ್ನು ಕೆಡಿಸುತ್ತಿದ್ದಾರೆ. [19]ಆದರೆ ದೇವರು ಹಾಕಿದಂಥ ಸುಸ್ಥಿರವಾದ ಅಸ್ತಿವಾರವನ್ನು ಯಾರಿಂದಲೂ ಕದಲಿಸಲಾಗದು. ಅದರಲ್ಲಿ "ತನ್ನವರು ಯಾರು ಎಂದು ಪ್ರಭು ಅರಿತಿದ್ದಾರೆ; ಮತ್ತು ತಾನು ಪ್ರಭುವಿನವನೆಂದು ಹೇಳಿಕೊಳ್ಳುವವರೆಲ್ಲರೂ ದುರ್ಮಾರ್ಗದಿಂದ ದೂರವಿರಲಿ," ಎಂದು ಲಿಖಿತವಾಗಿದೆ.

20 ದೊಡ್ಡ ಮನೆಯಲ್ಲಿ ಬೆಳ್ಳಿಬಂಗಾರದ ಪಾತ್ರೆಗಳಲ್ಲದೆ ಮರದ ಹಾಗೂ ಮಣ್ಣಿನ ಪಾತ್ರೆಗಳೂ ಇರುತ್ತವೆ. ಇವುಗಳಲ್ಲಿ ಕೆಲವು ಉತ್ತಮ ಬಳಕೆಗೂ ಇನ್ನೂ ಕೆಲವು ಸಾಮಾನ್ಯ ಬಳಕೆಗೂ ಬರುವುದುಂಟು. [21]ಹೀಗಿರಲಾಗಿ, ಒಬ್ಬನು ಕೀಳುತನದಿಂದ ತನ್ನನ್ನು ತಾನೇ ಶುದ್ಧೀಕರಿಸಿಕೊಂಡರೆ, ಅವನು ಉತ್ತಮ ಬಳಕೆಗೆ ಯೋಗ್ಯನಾಗುತ್ತಾನೆ. ಅಂಥವನು ದೇವರ ಸೇವೆಗೆ ಮೀಸಲಾಗುತ್ತಾನೆ, ಯಜಮಾನನಿಗೆ ಉಪಯುಕ್ತನಾಗುತ್ತಾನೆ. ಸತ್ಕಾರ್ಯಗಳನ್ನು ಕೈಗೊಳ್ಳಲು ಸಿದ್ಧನಾಗಿರುತ್ತಾನೆ. [22]ನೀನು ಯೌವನದ ಭಾವೋದ್ರೇಕಗಳಿಗೆ ತುತ್ತಾಗದೆ ಧರ್ಮ, ವಿಶ್ವಾಸ, ಪ್ರೀತಿ ಮತ್ತು ಶಾಂತಿ – ಇವುಗಳನ್ನು ರೂಢಿಸಿಕೋ. ಈ ದಿಸೆಯಲ್ಲಿ ಶುದ್ಧ ಹೃದಯದಿಂದ ದೇವರನ್ನು ಅರಸುವವನು ನಿನಗೆ ಆದರ್ಶವಾಗಿರಲಿ. [23]ಮೂರ್ಖ ಹಾಗೂ ಅನರ್ಥ ವಾಗ್ವಾದಗಳು ಜಗಳಕ್ಕೆ ಕಾರಣಗಳು. ಅವುಗಳ ಗೊಡವೆ ನಿನಗೆ ಬೇಡ. [24]ಪ್ರಭುವಿನ ಶರಣನಿಗೆ ಜಗಳ ಸಲ್ಲದು. ಆತನು ಎಲ್ಲರೊಡನೆ ಸೌಹಾರ್ದದಿಂದ ನಡೆದುಕೊಳ್ಳಬೇಕು. [25]ಬೋಧನೆಯಲ್ಲಿ ಪ್ರವೀಣನೂ ಕೇಡನ್ನು ಸಹಿಸದವನೂ ವಿರೋಧಿಗಳನ್ನು ತಾಳ್ಮೆಯಿಂದ ತಿದ್ದುವವನೂ ಆಗಿರಬೇಕು. ಆ ವಿರೋಧಿಗಳು ಪಶ್ಚಾತ್ತಾಪಪಟ್ಟು ಸನ್ಮಾರ್ಗವನ್ನು ಹಿಡಿಯುವಂತೆ ದೇವರು ಅವರಿಗೆ ಅನುಗ್ರಹಿಸಬಹುದು. [26]ಸೈತಾನನ ಬಲೆಯಲ್ಲಿ ಸಿಕ್ಕಿಕೊಂಡು ಅವನ ಇಚ್ಛಾನುಸಾರ ನಡೆಯುವವರು ಹೀಗೆ ಬಿಡುಗಡೆ ಹೊಂದಲು ಸಾಧ್ಯವಾಗಬಹುದು.

## ಅಂತಿಮ ದಿನಗಳು

**3** ಅಂತಿಮ ದಿನಗಳು ಕಷ್ಟಕರವಾದ ಕಾಲವಾಗಿರುತ್ತದೆಂಬುದನ್ನು ಜ್ಞಾಪಕದಲ್ಲಿಡು. 2ಜನರು
ಸ್ವಾರ್ಥಚಿಂತಕರೂ ಲೋಭಿಗಳೂ ಅಹಂಕಾರಿಗಳೂ ಬಡಾಯಿಕೋರರೂ ದೇವದೂಷಕರೂ ಹೆತ್ತವರಿಗೆ
ಅವಿಧೇಯರೂ ಕೃತಘ್ನರೂ ಭಕ್ತಿಹೀನರೂ ಆಗುವರು. 3ಅವರು ಮಮತೆ ಇಲ್ಲದವರೂ ಸಮಾಧಾನ
ಸಹಿಸದವರೂ ಚಾಡಿಕೋರರೂ ಸ್ವೇಚ್ಛಾವರ್ತಿಗಳೂ ಕ್ರೂರಿಗಳೂ ಒಳಿತನ್ನು ದ್ವೇಷಿಸುವವರೂ ಆಗುವರು.
4ನಂಬಿಕೆ ದ್ರೋಹಿಗಳೂ ದುಡುಕುವವರೂ ಮಹಾಗರ್ವಿಗಳೂ ಆಗುವರು. ದೇವರನ್ನು ಅರಸದೆ
ಭೋಗಗಳನ್ನೇ ಬಯಸುವರು. 5ಅವರು ಭಕ್ತಿಯ ವೇಷ ಧರಿಸಿದ್ದರೂ ಅದರ ನಿಜವಾದ ಶಕ್ತಿಯನ್ನು
ಅಲ್ಲಗಳೆಯುವರು. ಇಂಥವರ ಸಹವಾಸ ನಿನಗೆ ಬೇಡ. 6ಇವರಲ್ಲಿ ಕೆಲವರು ಮನೆಮನೆಗಳಿಗೆ ನುಸುಳಿ
ನಾನಾ ಪಾಪಗಳಿಂದಲೂ ಕಾಮನೆಗಳಿಂದಲೂ ಕೂಡಿರುವ ಮತಿಗೆಟ್ಟ ಮಹಿಳೆಯರನ್ನು
ವಶಪಡಿಸಿಕೊಳ್ಳುವರು. 7ಆ ಮಹಿಳೆಯರಾದರೋ ಯಾರಿಗೆ ಬೇಕಾದರೂ ಕಿವಿಗೊಡುವರು. ಸತ್ಯವನ್ನು
ಮಾತ್ರ ಮನಗಾಣರು. 8ಯನ್ನ ಮತ್ತು ಯಂಬ್ರ ಎಂಬವರು ಮೋಶೆಯನ್ನು ವಿರೋಧಿಸಿದಂತೆ, ಇವರು
ಸತ್ಯವನ್ನು ಪ್ರತಿಭಟಿಸುತ್ತಾರೆ. 9ದುರ್ಮತಿಗಳೂ ವಿಶ್ವಾಸಭ್ರಷ್ಟರೂ ಆಗಿದ್ದಾರೆ. ಆದರೆ ಅವರ ಮೂರ್ಖತನ
ದೀರ್ಘಕಾಲ ಬಾಳದು. ಯನ್ನ ಮತ್ತು ಯಂಬ್ರಳ ದೋಷದಂತೆ ಅದು ಸರ್ವರಿಗೂ ಬಟ್ಟಬಯಲಾಗುತ್ತದೆ.

## ಕೆಲವು ಸಲಹೆಗಳು

10 ನೀನಾದರೋ ನನ್ನ ಬೋಧನೆ, ನಡತೆ ಹಾಗೂ ಧ್ಯೇಯಗಳನ್ನು ಅರಿತಿರುವೆ. ನನ್ನ ವಿಶ್ವಾಸ,
ಸಹಿಷ್ಣುತೆ ಮತ್ತು ಸ್ಥೈರಣೆ ನಿನಗೆ ತಿಳಿದಿದೆ. 11ನಾನು ಅನುಭವಿಸಿದ ಹಿಂಸೆನೋವುಗಳ ಮತ್ತು ಕಷ್ಟ ದುಃಖಗಳ
ಕುರಿತು ಕೇಳಿರುವೆ. ಅಂತಿಯೋಕ್ಯ, ಇಕೋನಿಯ ಮತ್ತು ಲುಸ್ತ್ರಪಟ್ಟಣಗಳಲ್ಲಿ ನಾನು ಎಂಥ ಕ್ರೂರವಾದ
ಹಿಂಸೆ ಅನುಭವಿಸಿದೆನೆಂಬುದು ನಿನಗೆ ತಿಳಿಯದ ವಿಷಯವೇನೂ ಅಲ್ಲ. ಆದರೆ ಪ್ರಭು ನನ್ನನ್ನು
ಇವೆಲ್ಲವುಗಳಿಂದ ಪಾರುಮಾಡಿದರು. 12ಕ್ರಿಸ್ತ ಯೇಸುವಿನ ಅನುಯಾಯಿಯಾಗಿ ಭಕ್ತಿಯಿಂದ ಬಾಳಲು
ಆಶಿಸುವ ಪ್ರತಿಯೊಬ್ಬನೂ ಹಿಂಸೆಗೊಳಗಾಗುತ್ತಾನೆ. 13ದುಷ್ಕರ್ಮಿಗಳು ಮತ್ತು ದುರ್ಬೋಧಕರು ಇತರರನ್ನು
ವಂಚಿಸುತ್ತಾ ತಮ್ಮನ್ನೂ ವಂಚಿಸಿಕೊಳ್ಳುತ್ತಾ ದಿನೇದಿನೇ ಅಧೋಗತಿಗಿಳಿಯುತ್ತಾರೆ. 14ನೀನಾದರೋ ನಿನಗೆ
ಬೋಧಿಸಲಾಗಿರುವ ಹಾಗೂ ನೀನು ದೃಢವಾಗಿ ನಂಬಿರುವ ಸತ್ಯಗಳನ್ನು ಅನುಸರಿಸು. 15ನಿನ್ನ ಬೋಧಕರು
ಯಾರೆಂಬುದು ನಿನಗೆ ಗೊತ್ತಿದೆ. ಚಿಕ್ಕಂದಿನಿಂದಲೇ ನೀನು ಪವಿತ್ರಗ್ರಂಥವನ್ನು ಪರಿಚಯಮಾಡಿಕೊಂಡಿರುವೆ.
ಯೇಸುಕ್ರಿಸ್ತರನ್ನು ವಿಶ್ವಾಸಿಸುವುದರ ಮೂಲಕ ಜೀವೋದ್ಧಾರವನ್ನು ಪಡೆಯಬಹುದೆಂಬ ಜ್ಞಾನವು
ಲಭಿಸುವುದು ಆ ಪವಿತ್ರಗ್ರಂಥದಿಂದಲೇ. 16ಪವಿತ್ರಗ್ರಂಥ ದೈವಪ್ರೇರಣೆಯಿಂದ ರಚಿತವಾದುದು. ಆದ್ದರಿಂದ
ಅದು ಪ್ರಬೋಧನೆಗೂ ಖಂಡನೆಗೂ ತಿದ್ದುಪಾಟಿಗೂ ನೀತಿಬೋಧೆಗೂ ಉಪಯುಕ್ತವಾಗಿದೆ. 17ಅದರ
ಮೂಲಕ ದೈವಭಕ್ತರು ಸಿದ್ಧರೂ ಸಕಲ ಸತ್ಕಾರ್ಯಗಳಿಗೆ ಸನ್ನದ್ಧರೂ ಆಗಬಲ್ಲರು.

**4** ದೇವರ ಸಮಕ್ಷಮದಲ್ಲಿ, ಮತ್ತು ಜೀವಿಸುವವರಿಗೂ ಸತ್ತವರಿಗೂ ನ್ಯಾಯತೀರ್ಪನ್ನು ಕೊಡಲು ಬರುವ
ಕ್ರಿಸ್ತಯೇಸುವಿನ ಸಮಕ್ಷಮದಲ್ಲಿ, ನಾನು ಅವರ ಪ್ರತ್ಯಕ್ಷತೆಯನ್ನೂ ಸಾಮ್ರಾಜ್ಯವನ್ನೂ ಮುಂದಿಟ್ಟು ನಿನಗೆ
ಆಜ್ಞಾಪಿಸುವುದೇನೆಂದರೆ: 2ನೀನು ದೇವರ ವಾಕ್ಯವನ್ನು ಆಸಕ್ತಿಯಿಂದ ಕಾಲ ಅಕಾಲಗಳನ್ನು ಲೆಕ್ಕಿಸದೆ
ಬೋಧಿಸು. ಸತ್ಯವನ್ನು ಮನಗಾಣಿಸು; ತಪ್ಪನ್ನು ತಿದ್ದು; ಒಳ್ಳೆಯದನ್ನು ಪ್ರೋತ್ಸಾಹಿಸು; ತಾಳ್ಮೆಯನ್ನು
ಕಳೆದುಕೊಳ್ಳದೆ ಉಪದೇಶಮಾಡು. 3ಜನರು ಸದ್ಬೋಧನೆಯನ್ನು ಸಹಿಸದೆ, ಸ್ವೇಚ್ಛಾಚಾರಿಗಳಾಗುವ ಕಾಲವು
ಬರುತ್ತದೆ. ತಮ್ಮ ದುರಿಚ್ಛೆಗಳಿಗೆ ಅನುಗುಣವಾಗಿ ಬೋಧಿಸುವವರಿಗೆ ಕಾತರದಿಂದ ಕಿವಿಗೊಡಲು
ಕೂಡಿಕೊಳ್ಳುತ್ತಾರೆ. 4ಸತ್ಯಕ್ಕೆ ಕಿವಿಗೊಡದೆ ಕಟ್ಟುಕತೆಗಳನ್ನು ಕೇಳಲು ಅಲೆದಾಡುತ್ತಾರೆ. 5ಆದರೆ, ನೀನು ಎಲ್ಲ
ಸನ್ನಿವೇಶಗಳಲ್ಲೂ ಸ್ಥಿರಚಿತ್ತದಿಂದಿರು. ಕಷ್ಟವನ್ನು ಸಹಿಸಿಕೋ. ಶುಭಸಂದೇಶವನ್ನು ನಿಷ್ಠೆಯಿಂದ ಸಾರು; ನಿನ್ನ
ಕರ್ತವ್ಯವನ್ನು ಸರಿಯಾಗಿ ನಿರ್ವಹಿಸು.

6 ನಾನು ಯಜ್ಞಪಶುವಾಗಿ ಅರ್ಪಿತನಾಗುವ ಸಮಯವು ಬಂದಿದೆ. ಈ ಲೋಕದಿಂದ ತೆರಳಬೇಕಾದ ಕಾಲವೂ ಕೂಡಿಬಂದಿದೆ. [7]ಬಾಳಿನ ಸ್ಪರ್ಧೆಯಲ್ಲಿ ಭಾಗವಹಿಸಿದ್ದೇನೆ. ನನ್ನ ಓಟವನ್ನು ಮುಗಿಸಿದ್ದೇನೆ. ವಿಶ್ವಾಸವನ್ನು ಕಾಪಾಡಿಕೊಂಡಿದ್ದೇನೆ. [8]ಇನ್ನು ನನಗೆ ಉಳಿದಿರುವುದು ಒಂದೇ: ಸಜ್ಜನರಿಗೆ ಸಲ್ಲುವಂಥ ಜಯಮಾಲೆ ನನಗೀಗ ಸಿದ್ಧವಾಗಿದೆ. ಅದನ್ನು ನೀತಿವಂತ ನ್ಯಾಯಾಧಿಪತಿಯಾದ ಪ್ರಭು ಆ ದಿನದಂದು ನನಗೆ ಕೊಡುವರು; ನನಗೆ ಮಾತ್ರವಲ್ಲ, ಅವರ ಪ್ರತ್ಯಕ್ಷತೆಯನ್ನು ಪ್ರೀತಿಯಿಂದ ನಿರೀಕ್ಷಿಸುತ್ತಿರುವ ಎಲ್ಲರಿಗೂ ಕೊಡುವರು.

**ವೈಯಕ್ತಿಕ ಹಿತನುಡಿಗಳು**

9 ನನ್ನ ಬಳಿಗೆ ಸಾಧ್ಯವಾದಷ್ಟು ಬೇಗನೆ ಬರುವುದಕ್ಕೆ ಪ್ರಯತ್ನಿಸು. [10]ದೇಮನು ಇಹಲೋಕದ ಆಶಾಪಾಶಗಳಿಗೆ ಒಳಗಾಗಿ ನನ್ನನ್ನು ಬಿಟ್ಟು ಥೆಸಲೋನಿಕಕ್ಕೆ ಹೋದನು. ಕ್ರೆಸ್ಕನು ಗಲಾತ್ಯಕ್ಕೂ ತೀತನು ದಲ್ಮಾತ್ಯಕ್ಕೂ ಹೋಗಿದ್ದಾರೆ. [11]ಲೂಕನು ಮಾತ್ರ ನನ್ನ ಜೊತೆಯಿದ್ದಾನೆ. ನೀನು ಬರುವಾಗ ಮಾರ್ಕನನ್ನು ನಿನ್ನ ಸಂಗಡ ಕರೆದುಕೊಂಡು ಬಾ. ಅವನ ಸೇವೆ ನನಗೆ ಅಗತ್ಯವಾಗಿದೆ. [12]ತುಖಿಕನನ್ನು ನಾನು ಎಫೆಸಕ್ಕೆ ಕಳುಹಿಸಿದ್ದೇನೆ. [13]ನೀನು ಬರುವಾಗ ತ್ರೋವದಲ್ಲಿ ನಾನು ಕರ್ಪನ ಬಳಿ ಬಿಟ್ಟುಬಂದ ನನ್ನ ಮೇಲಂಗಿಯನ್ನು ತೆಗೆದುಕೊಂಡು ಬಾ. ನನ್ನ ಕೆಲವು ಪುಸ್ತಕಗಳನ್ನೂ ಮುಖ್ಯವಾಗಿ ಚರ್ಮದ ಸುರುಳಿಗಳನ್ನೂ ತಪ್ಪದೆ ತೆಗೆದುಕೊಂಡು ಬಾ.

14 ಕಂಚುಗಾರನಾದ ಅಲೆಗ್ಸಾಂಡರನು ನನಗೆ ಬಹಳ ಕೇಡುಮಾಡಿದ್ದಾನೆ. ಪ್ರಭು ಅವನ ಕೃತ್ಯಗಳಿಗೆ ತಕ್ಕ ಶಿಕ್ಷೆಯನ್ನು ವಿಧಿಸುವರು. [15]ನೀನು ಅವನ ವಿಷಯದಲ್ಲಿ ಎಚ್ಚರಿಕೆಯಿಂದಿರು. ನಮ್ಮ ಬೋಧನೆಗೆ ಅವನು ಕಟುವಾದ ವಿರೋಧಿ ಆಗಿದ್ದಾನೆ.

16 ನಾನು ಮೊದಲನೆಯ ಸಾರಿ ವಿಚಾರಣೆಗೆ ಒಳಗಾಗಿ ಪ್ರತಿವಾದಿಸುತ್ತಿದ್ದಾಗ ಯಾರೂ ನನ್ನ ಪರವಾಗಿ ನಿಲ್ಲಲಿಲ್ಲ. ಎಲ್ಲರೂ ನನ್ನನ್ನು ಕೈಬಿಟ್ಟರು. ದೇವರು ಅವರನ್ನು ಕ್ಷಮಿಸಲಿ. [17]ಆದರೆ ಪ್ರಭು ನನಗೆ ಬೆಂಬಲವಾಗಿ ನಿಂತರು. ನಾನು ಶುಭಸಂದೇಶವನ್ನು ಸಂಪೂರ್ಣವಾಗಿ ಸಾರುವಂತೆಯೂ ಅನ್ಯಧರ್ಮೀಯರೆಲ್ಲರು ಅದನ್ನು ಕೇಳುವಂತೆಯೂ ಮಾಡಿದರು. ಅಲ್ಲದೆ, ಸಿಂಹದ ಬಾಯಿಂದಲೂ ನನ್ನನ್ನು ಸಂರಕ್ಷಿಸಿದರು. [18]ಪ್ರಭು ನನ್ನನ್ನು ಸಕಲ ಕೇಡುಗಳಿಂದ ರಕ್ಷಿಸಿ, ತಮ್ಮ ಸ್ವರ್ಗಸಾಮ್ರಾಜ್ಯಕ್ಕೆ ನನ್ನನ್ನು ಸುರಕ್ಷಿತವಾಗಿ ಸೇರಿಸುವರು. ಯುಗಯುಗಾಂತರಕ್ಕೂ ಅವರಿಗೆ ಮಹಿಮೆ ಸಲ್ಲಲಿ. ಆಮೆನ್.

**ಶುಭಾಶಯಗಳು**

19 ಪ್ರಿಸ್ಕಳಿಗೂ ಅಕ್ವಿಲನಿಗೂ ಒನೇಸಿಫೊರನ ಮನೆಯವರಿಗೂ ನನ್ನ ಶುಭಾಶಯಗಳನ್ನು ತಿಳಿಸು. [20]ಎರಸ್ತನು ಕೊರಿಂಥದಲ್ಲಿ ಉಳಿದುಕೊಂಡಿದ್ದಾನೆ. ತ್ರೊಫಿಮನನ್ನು ಅನಾರೋಗ್ಯದ ನಿಮಿತ್ತ ಮಿಲೇತದಲ್ಲಿಯೇ ಬಿಟ್ಟಿದ್ದೇನೆ. [21]ಚಳಿಗಾಲಕ್ಕೆ ಮೊದಲೇ ಇಲ್ಲಿಗೆ ಬರಲು ಪ್ರಯತ್ನಿಸು. ಯುಬೂಲ, ಪುದೇಯ, ಲೀನ, ಕ್ಲೌದ್ಯ ಇವರು ಮತ್ತು ಇತರ ಸಹೋದರರು ನಿನಗೆ ಶುಭಾಶಯಗಳನ್ನು ಕಳುಹಿಸಿದ್ದಾರೆ. [22]ಪ್ರಭು ನಿನ್ನೊಂದಿಗಿರಲಿ. ದೇವರ ಅನುಗ್ರಹ ನಿಮ್ಮೆಲ್ಲರಲ್ಲೂ ಇರಲಿ !